**Bangalore**
**Regional News**
**06.04.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

<u>ಮುಖ್ಯಾಂಶಗಳು</u>

1. ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದಲ್ಲಿ ಅವ್ಯವಹಾರ ಆರೋಪ - ಡಿಜಿಟಲ್ ದಾಖಲೆ ವಶಪಡಿಸಿಕೊಂಡ ಇಡಿ ಅಧಿಕಾರಿಗಳು
2. ಒಳ ಮೀಸಲಾತಿ ಅನುಷ್ಠಾನಗೊಳಿಸಲು ಸರ್ಕಾರ ಬದ್ಧ - ಸಚಿವ ಕೆ.ಎಚ್.ಮುನಿಯಪ್ಪ
3. ಸಿಇಟಿ ಪ್ರವೇಶ ಪತ್ರ ಬಿಡುಗಡೆ ಮಾಡಿದ ಕರ್ನಾಟಕ ಪರೀಕ್ಷಾ ಪ್ರಾಧಿಕಾರ
4. ನಾಳೆ ವಿಶ್ವವಿಖ್ಯಾತ ಮೇಲುಕೋಟೆ ವೈರಮುಡಿ ಬ್ರಹ್ಮೋತ್ಸವ; ಜಿಲ್ಲಾಡಳಿತದಿಂದ ಸಕಲ ಸಿದ್ಧತೆ
5. ರಾಜ್ಯ ಸರ್ಕಾರದ ವಿರುದ್ಧ ನಾಳೆಯಿಂದ ಬಿಜೆಪಿ ಜನಾಕ್ರೋಶ ಯಾತ್ರೆ

<><><>

ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದಲ್ಲಿ ೯೭ ಕೋಟಿ ರೂಪಾಯಿ ಸರ್ಕಾರಿ ನಿಧಿಯನ್ನು ದುರುಪಯೋಗ ಪಡಿಸಿಕೊಂಡ ಆರೋಪದ ಮೇಲೆ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಬೆಂಗಳೂರಿನಲ್ಲಿಂದು ದಾಳಿ ನಡೆಸಿದ್ದಾರೆ. ಈ ವೇಳೆ ಕೆಲವು ಡಿಜಿಟಲ್ ದಾಖಲೆ ಮತ್ತು ಆಸ್ತಿಗಳನ್ನು ವಶಪಡಿಸಿಕೊಂಡಿದ್ದಾರೆ ಎಂದು ಐಎಎನ್‌ಎಸ್ ಸುದ್ದಿ ಸಂಸ್ಥೆ ತಿಳಿಸಿದೆ. ಭೋವಿ ಸಮುದಾಯಕ್ಕೆ ಉದ್ಯೋಗ ಸೃಷ್ಟಿಸಲು ರಾಜ್ಯ ಸರ್ಕಾರವು ನಿಗಮಕ್ಕೆ ಹಂಚಿಕೆ ಮಾಡಿದ ೯೭ ಕೋಟಿ ರೂಪಾಯಿ ಹಣವನ್ನು ದುರುಪಯೋಗ ಪಡಿಸಿಕೊಳ್ಳಲಾಗಿದೆ ಎಂಬ ಆರೋಪ ಕೇಳಿ ಬಂದಿತ್ತು. ಈ ಹಿನ್ನೆಲೆಯಲ್ಲಿ ನಿಗಮದ ಅಧಿಕಾರಿಗಳ ಹಾಗೂ ಸಿಬ್ಬಂದಿ ನಿವಾಸಗಳ ಮೇಲೆ ಇಡಿ ಅಧಿಕಾರಿಗಳು ದಾಳಿ ನಡೆಸಿ ಪರಿಶೀಲನೆ ನಡೆಸಿದ್ದಾರೆ.

<><><>

ಒಳ ಮೀಸಲಾತಿ ಅನುಷ್ಠಾನಗೊಳಿಸಲು ಸರ್ಕಾರ ಬದ್ಧವಾಗಿದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್. ಮುನಿಯಪ್ಪ ತಿಳಿಸಿದ್ದಾರೆ. ವಿಜಯನಗರದಲ್ಲಿಂದು ಮಾದಾರಚನ್ನಯ್ಯ ಸೇವಾ ಸಮಿತಿಯ ಸಮಾವೇಶದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಪರಿಶಿಷ್ಟ ಜಾತಿಯ ಎಡ ಸಮುದಾಯಕ್ಕೆ ಸಾಮಾಜಿಕ ನ್ಯಾಯ ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಭರವಸೆ ನೀಡಿದ್ದಾರೆ. ಯಾವುದೇ ಸಮುದಾಯವಿರಲಿ, ಪಕ್ಷವಿರಲಿ ಒಗ್ಗಟಾಗಿ ಹೋರಾಡದಿದ್ದರೆ, ಅ ನ್ಯಾಯ ಸಿಗುವುದಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ. ಇಲ್ಲಿಯವರೆಗೂ ಪರಿಶಿಷ್ಟ ಜಾತಿಯ

ಎಡಸಮುದಾಯಕ್ಕೆ ದಕ್ಕಬೇಕಾದ ಸಾಮಾಜಿಕ, ಆರ್ಥಿಕ ಹಾಗೂ ರಾಜಕೀಯ ಸ್ಥಾನಮಾನಗಳು ಸಿಕ್ಕಿಲ್ಲ ಎಂದು ವಿಷಾದ ವ್ಯಕ್ತಪಡಿಸಿದ್ದಾರೆ.

<><><><>

ಯುಜಿಸಿಇಟಿ-೨೫ ಪರೀಕ್ಷೆಗೆ ಪ್ರವೇಶ ಪತ್ರವನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಬಿಡುಗಡೆ ಮಾಡಿದೆ. ಅಭ್ಯರ್ಥಿಗಳು ಪ್ರವೇಶ ಪತ್ರವನ್ನು ಪ್ರಾಧಿಕಾರದ ಲಿಂಕ್ ಮೂಲಕ ಡೌನ್‌ಲೋಡ್ ಮಾಡಿಕೊಳ್ಳಬಹುದು. ಅಭ್ಯಾಸ ಸಲುವಾಗಿ ಪ್ರವೇಶ ಪತ್ರದ ಜೊತೆಗೆ ಮಾದರಿ ಒಎಂಆರ್ ಶೀಟ್ ನೀಡಲು ನಿರ್ಧರಿಸಲಾಗಿದೆ. ಇದೇ ೧೫, ೧೬ ಮತ್ತು ೧೭ ರಂದು ಪರೀಕ್ಷೆ ನಡೆಯಲಿದೆ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದೆ.

<><><><>

ಉದ್ಯೋಗ ಪಡೆಯುವುದಕ್ಕಿಂತ ಉದ್ಯೋಗ ಸೃಷ್ಟಿ ಮಾಡುವ ಗುರಿಯನ್ನು ವಿದ್ಯಾರ್ಥಿಗಳು ಇಟ್ಟುಕೊಳ್ಳಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕರೆ ನೀಡಿದ್ದಾರೆ. ಕನಕಪುರದಲ್ಲಿ ನಡೆದ ರೂರಲ್ ಎಜುಕೇಷನ್ ಸೊಸೈಟಿ ಸ್ಥಾಪಕ ಅಧ್ಯಕ್ಷ, ಮಾಜಿ ಶಾಸಕ ಎಸ್.ಕರಿಯಪ್ಪ ೧೨೫ನೇ ಜನ್ಮ ದಿನೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಶಿಕ್ಷಣ ಪ್ರಬಲ ಅಸ್ತ್ರವಾಗಿದ್ದು, ಜಗತ್ತನ್ನೇ ಬದಲಿಸಬಹುದು ಎಂದು ಹೇಳಿದ್ದಾರೆ. ಗ್ರಾಮೀಣ ಮಕ್ಕಳಿಗೆ ಶಿಕ್ಷಣ ಕೊಡಿಸುವ ಹಿನ್ನೆಲೆಯಲ್ಲಿ ಕರಿಯಪ್ಪನವರು ಶಿಕ್ಷಣ ಸಂಸ್ಥೆ ಆರಂಭಿಸುವ ಮೂಲಕ ಹಲವಾರು ಮಕ್ಕಳಿಗೆ ದಾರಿ ದೀಪವಾಗಿದ್ದಾರೆ ಎಂದು ತಿಳಿಸಿದ್ದಾರೆ.

<><><><>

ವಿಶ್ವವಿಖ್ಯಾತ ಮೇಲುಕೋಟೆ ಚಲುವನಾರಾಯಣಸ್ವಾಮಿಯ ವೈರಮುಡಿ ಉತ್ಸವ ನಾಳೆ ನಡೆಯಲಿದೆ. ಕಳೆದೊಂದು ವಾರದಿಂದ ವೈರಮುಡಿ ಅಂಗವಾಗಿ ಪೂಜಾ ಕೈಂಕರ್ಯಗಳು ಹಾಗೂ ಸಕಲ ಸಿದ್ಧತೆಗಳು ನಡೆಯುತ್ತಿದೆ. ನಾಳೆ ರಾತ್ರಿ ೮ ಗಂಟೆಗೆ ವೈರಮುಡಿ ಬ್ರಹ್ಮೋತ್ಸವ ಜರುಗಲಿದೆ. ನಾಳೆ ಬೆಳಗ್ಗೆ ಮಂಡ್ಯ ನಗರದ ಜಿಲ್ಲಾ ಖಜಾನೆಯಿಂದ ವಜ್ರಖಚಿತ ವೈರಮುಡಿ ಹಾಗೂ ಆಭರಣಗಳನ್ನು ಜಿಲ್ಲಾಡಳಿತದ ಸಮ್ಮುಖದಲ್ಲಿ ಮೇಲುಕೋಟೆಯ ಸ್ಥಾನಿಕ ಅರ್ಚಕರು ದೇಗುಲಕ್ಕೆ ಕೊಂಡೊಯ್ಯಲಿದ್ದಾರೆ. ಮಂಡ್ಯದ ಲಕ್ಷ್ಮಿ ಜನಾರ್ದನ ದೇಗುಲದಲ್ಲಿ ವಿಶೇಷ ಪೂಜೆ ಸಲ್ಲಿಸಿದ ಬಳಿಕ, ಬಿಗಿ ಭದ್ರತೆಯಲ್ಲಿ ಆಭರಣಗಳು ಸಂಜೆ ವೇಳೆಗೆ ಮೇಲುಕೋಟೆ ತಲುಪಲಿವೆ. ದೇವಾಲಯದ ಆವರಣದಲ್ಲಿ ಜಿಲ್ಲಾಧಿಕಾರಿಗಳ ಸಮ್ಮುಖದಲ್ಲಿ ಆಭರಣಗಳ ಪರ್ಕಾವಣೆ ನಡೆಯಲಿದೆ. ಬಳಿಕ ಚಲುವನಾರಾಯಣನಿಗೆ ಆಭರಣಗಳನ್ನು ಧರಿಸಿ, ಮೇಲುಕೋಟೆಯ ರಾಜಬೀದಿಯಲ್ಲಿ ವಜ್ರಖಚಿತ ವೈರಮುಡಿ ಉತ್ಸವ ಜರುಗಲಿದೆ. ಸುಮಾರು ೨ ಲಕ್ಷ ಜನ ಸೇರುವ ನಿರೀಕ್ಷೆ ಇದ್ದು, ಮಂಡ್ಯ, ಮೈಸೂರು, ಬೆಂಗಳೂರು ನಗರ ಸೇರಿ ರಾಜ್ಯದ ಹಲವು ಜಿಲ್ಲೆಗಳಿಂದ ನೂರಾರು ಬಸ್‌ಗಳ ವ್ಯವಸ್ಥೆ ಕಲ್ಪಿಸಲಾಗಿದೆ. ಮುನ್ನೆಚ್ಚರಿಕಾ ಕ್ರಮವಾಗಿ ಬಿಗಿ ಪೊಲೀಸ್ ಬಂದೋಬಸ್ತ್ ಕೈಗೊಳ್ಳಲಾಗಿದೆ.

<><><>

ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಎರಡನೇ ಹಂತದ ಹೋರಾಟ ನಡೆಸಲು ನಿರ್ಧರಿಸಿದೆ. ಜನಾಕ್ರೋಶ ಯಾತ್ರೆ ಹೆಸರಿನಲ್ಲಿ ಸರ್ಕಾರದ ವಿರುದ್ಧ ನಾಲ್ಕು ಹಂತಗಳಲ್ಲಿ ಹೋರಾಟಕ್ಕೆ ಬಿಜೆಪಿ ಮುಂದಾಗಿದೆ. ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಮೈಸೂರಿನಲ್ಲಿ ನಾಳೆ ಜನಾಕ್ರೋಶ ಯಾತ್ರೆಗೆ ಚಾಲನೆ ನೀಡಲಿದ್ದಾರೆ. ಸರ್ಕಾರದ ದರ ಏರಿಕೆ, ಭ್ರಷ್ಟಾಚಾರ, ಕಾನೂನು ಅವ್ಯವಸ್ಥೆ, ಗುತ್ತಿಗೆಯಲ್ಲಿ ಅಲ್ಪಸಂಖ್ಯಾತರಿಗೆ ಮೀಸಲಾತಿ ನೀಡುವುದನ್ನು ವಿರೋಧಿಸಿ ಜನಾಕ್ರೋಶ ಯಾತ್ರೆ ನಡೆಯಲಿದೆ ಎಂದು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಬಿಜೆಪಿ ತಿಳಿಸಿದೆ. ನಾಳೆಯಿಂದ ಇದೇ ೧೨ರವರೆಗೆ ಮೊದಲ ಹಂತದ ಜನಾಕ್ರೋಶ ಯಾತ್ರೆಯು ಮೈಸೂರು, ಚಾಮರಾಜನಗರ, ಮಂಡ್ಯ, ಹಾಸನ, ಕೊಡಗು, ಮಂಗಳೂರು, ಉಡುಪಿ, ಚಿಕ್ಕಮಗಳೂರು, ಶಿವಮೊಗ್ಗ, ಉತ್ತರ ಕನ್ನಡ ಜಿಲ್ಲೆಗಳಲ್ಲಿ ನಡೆಯಲಿದೆ.

<><><>

ದೇಶದ ಯಾವ ರಾಜ್ಯದಲ್ಲೂ ಕಾಂಗ್ರೆಸ್ ಪಕ್ಷಕ್ಕೆ ಆಡಳಿತ ನಡೆಸೋಕೆ ಸಾಧ್ಯವಾಗುತ್ತಿಲ್ಲ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಭಾರತೀಯ ಜನತಾ ಪಾರ್ಟಿ ಸಂಸ್ಥಾಪನಾ ದಿನಾಚರಣೆ ಅಂಗವಾಗಿ ಧ್ವಜಾರೋಹಣ ನೆರವೇರಿಸಿ, ಮಾತನಾಡಿದ ಅವರು, ರಾಜ್ಯದಲ್ಲಿ ಹಾಲು, ಡೀಸೆಲ್ ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ಏರಿಕೆ ಆಗಿದೆ ಎಂದು ಆರೋಪಿಸಿದ್ದಾರೆ.

ಧ್ವನಿ: ಪ್ರಲ್ಹಾದ್ ಜೋಶಿ (೨೮ ಸೆಕೆಂಡ್‌ಗಳು)

<><><>

ಮಂಗಳೂರು ನಗರದ ಉರ್ವ ಮಾರ್ಕೆಟ್‌ನಲ್ಲಿ ನಿರ್ಮಾಣಗೊಳ್ಳುತ್ತಿರುವ ಒಳಾಂಗಣ ಕ್ರೀಡಾಂಗಣದ ಕಾಮಗಾರಿಯನ್ನು ತ್ವರಿತಗತಿಯಲ್ಲಿ ನಡೆಸಿ ಇದೇ ೧೫ರೊಳಗೆ ಪೂರ್ಣಗೊಳಿಸುವಂತೆ ದಕ್ಷಿಣ ಕನ್ನಡ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಸೂಚಿಸಿದ್ದಾರೆ. ಒಳಾಂಗಣ ಕ್ರೀಡಾಂಗಣ ಪರಿಶೀಲನೆ ಬಳಿಕ ಮಾತನಾಡಿದ ಸಚಿವರು, ಯಾವುದೇ ಕಾರಣಕ್ಕೂ ಕಾಮಗಾರಿ ವಿಳಂಬವಾಗದಂತೆ ನಿರ್ದೇಶನ ನೀಡಿದ್ದಾರೆ.

<><><>

ಬಂಡೀಪುರ ರಾತ್ರಿ ಸಂಚಾರ ತೆರವು ವಿರೋಧಿಸಿ ಕನ್ನಡಪರ ಹೋರಾಟಗಾರ ವಾಟಾಳ್ ನಾಗರಾಜ್ ಇಂದು ಮೈಸೂರಿನಲ್ಲಿ ತೆಂಗಿನಕಾಯಿ ಒಡೆಯುವ ಮೂಲಕ ವಿನೂತನ ಪ್ರತಿಭಟನೆ ನಡೆಸಿದರು. ಜಯಚಾಮರಾಜ ಒಡೆಯರ್ ವೃತ್ತದಲ್ಲಿ ವಾಟಾಳ್ ನಾಗರಾಜ್, ರಾಜ್ಯ ಸರ್ಕಾರದ ವಿರುದ್ಧ ವಿವಿಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಈ ವೇಳೆ ಮಾತನಾಡಿದ ಅವರು, ಬಂಡೀಪುರ ರಾತ್ರಿ ಸಂಚಾರ ಆರಂಭಿಸಲು ಪ್ರಯತ್ನ ಮಾಡಲಾಗುತ್ತಿದೆ ಎಂದು ದೂರಿದ್ದಾರೆ.

ಕರ್ನಾಟಕವು ಕೇರಳ ಸರ್ಕಾರಕ್ಕೆ ಮಣಿದು ರಾತ್ರಿ ಸಂಚಾರ ನಿಷೇಧ ತೆರವು ಮಾಡಿದ್ರೆ ಅಪಾಯ. ಕಟ್ಟಿಟ್ಟ ಬುತ್ತಿ. ಸರ್ಕಾರ ಯಾವುದೇ ಕಾರಣಕ್ಕೂ ರಾತ್ರಿ ಸಂಚಾರ ನಿಷೇಧ ತೆರವು ಮಾಡಬಾರದು. ನಿಷೇಧ ತೆರವು ಮಾಡಿದರೆ ಉಗ್ರ ಹೋರಾಟ ನಡೆಸುವ ಎಚ್ಚರಿಕೆ ನೀಡಿದ್ದಾರೆ.

<><><>

ಗ್ರಾಮೀಣ ಭಾಗದ ಅಭಿವೃದ್ಧಿಯ ಜೊತೆಗೆ ಗ್ರಾಮೀಣ ಜನರಿಗೆ ನೂರು ದಿನಗಳ ಉದ್ಯೋಗ ನೀಡುವ ಮಹಾತ್ಮ ಗಾಂಧಿ ನರೇಗಾ ಕಾಮಗಾರಿಗಳಲ್ಲಿ ಮಹಿಳೆಯರು ಹೆಚ್ಚಾಗಿ ಭಾಗವಹಿಸುವಂತೆ ಮೈಸೂರು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಸಿ.ಕೃಷ್ಣ ಕರೆ ನೀಡಿದ್ದಾರೆ. ನರೇಗಾ ಯೋಜನೆಯಲ್ಲಿ ಮಹಿಳೆಯರ ಭಾಗವಹಿಸುವಿಕೆ ಹೆಚ್ಚಳಕ್ಕಾಗಿ ಏಪ್ರಿಲ್‌ನಿಂದ ಜೂನ್‌ವರೆಗೆ 'ಸ್ತ್ರೀ ಚೇತನ' ಅಭಿಯಾನ ಹಮ್ಮಿಕೊಳ್ಳಲಾಗಿದೆ. ಮಹಿಳೆಯರಿಗೆ ಉದ್ಯೋಗ ಚೀಟಿ ವಿತರಿಸುವ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು, ಕುಟುಂಬವೊಂದಕ್ಕೆ ನೂರು ದಿನಗಳ ಕೆಲಸ ಖಾತರಿ ಇದ್ದು, ವಾರ್ಷಿಕವಾಗಿ ೩೭ ಸಾವಿರ ರೂಪಾಯಿಗಳನ್ನು ಗಳಿಸಬಹುದಾಗಿದೆ ಎಂದು ತಿಳಿಸಿದ್ದಾರೆ.

<><><>

ಕರಾವಳಿ ಕರ್ನಾಟಕದ ಹಲವು ಸ್ಥಳಗಳಲ್ಲಿ ಮಳೆಯಾಗಿದೆ. ಕರಾವಳಿ ಕರ್ನಾಟಕದ ಹಲವೆಡೆ ಇಂದು ಕೂಡ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕೆಲವಡೆ ಹಗುರದಿಂದ ಸಾಧಾರಣ ಮಳೆಯಾಗಲಿದೆ. ವಿಜಯಪುರ, ಕೊಪ್ಪಳ, ರಾಯಚೂರು, ಯಾದಗಿರಿ, ಕಲಬುರಗಿ ಜಿಲ್ಲೆಗಳ ಲಘು ಮಳೆಯಾಗುವ ಸಾಧ್ಯತೆ ಇದೆ. ಉಳಿದ ಜಿಲ್ಲೆಗಳಲ್ಲಿ ಒಣಹವೆ ಮುಂದುವರೆಯಲಿದೆ. ಬೆಂಗಳೂರಿನಲ್ಲಿ ಭಾಗಶಃ ಮೋಡಕವಿದ ವಾತಾವರಣ ಇರಲಿದೆ. ಗುಡುಗು ಸಹಿತ ಹಗುರ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

<><><>

ದಾವಣಗೆರೆ ಜಿಲ್ಲಾ ವ್ಯಾಪ್ತಿಯಲ್ಲಿನ ಸರ್ಕಾರಿ ಕಚೇರಿಗಳ ಆವರಣ, ಶಾಲಾ-ಕಾಲೇಜು, ರಸ್ತೆ ಬದಿ, ಆಸ್ಪತ್ರೆ ಆವರಣ, ಗೋಡೆಗಳ ಮೇಲೆ ಅಂಟಿಸಿರುವ ಬಿತ್ತಿ ಪತ್ರಗಳು ಹಾಗೂ ಜಾಹಿರಾತುಗಳನ್ನು ಕೂಡಲೇ ತೆರವುಗೊಳಿಸುವಂತೆ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಸೂಚಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>